# ಕರ್ನಾಟಕ ವಿಧಾನ ಪರಿಷತ್ತು

## ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಶೀಲ್ ಜಿ. ನಮೋಶಿ ಹಾಗೂ ಶ್ರೀ ವೈ.ಎಂ.ಸತೀಶ್ ಇವರು ನಿಯಮ 72ರಡಿ ಪ್ರಸ್ತಾಪಿಸಿರುವ ಗಮನ ಸೆಳೆಯುವ ಸೂಚನಾ ಪತ್ರಕ್ಕೆ ಉತ್ತರ

**ಸೂಚನೆ:**

ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಖಾಲಿ ಇರುವ ಉಪ ನಿರ್ದೇಶಕ, ಸಹಾಯಕ ನಿರ್ದೇಶಕ, ಹಿರಿಯ ಸಹಾಯಕ ನಿರ್ದೇಶಕ ಹುದ್ದೆಗಳಿಗೆ ನೇಮಕಾತಿ ನಡೆಸುವ ಬಗ್ಗೆ, ಹಾಗೂ ಪ್ರಸ್ತುತ ಇಲ್ಲಿರುವ ಅಧಿಕಾರಿಗಳು ಬೇರೆ ಇಲಾಖೆಗೆ ನಿಯೋಜನೆ ಮೇಲೆ ಹೋಗುತ್ತಿರುವುದರಿಂದ ಆಗುತ್ತಿರುವ ಅವ್ಯವಸ್ಥೆಯ ಕುರಿತು ಮಾನ್ಯ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಚಿವರ ಗಮನಸೆಳೆಯಬಯಸುತ್ತೇನೆ.

**ಉತ್ತರ :**

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಖಾಲಿ ಇರುವ ಒಟ್ಟು 01 ಉಪ ನಿರ್ದೇಶಕರು, 03 ಹಿರಿಯ ಸಹಾಯಕ ನಿರ್ದೇಶಕರು ಮತ್ತು 02 ಸಹಾಯಕ ನಿರ್ದೇಶಕರುಗಳ ಹುದ್ದೆಗಳನ್ನು ಭರ್ತಿ ಮಾಡಲು, ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಅರ್ಹತಾದಾಯಕ ಸೇವೆ ಸಲ್ಲಿಸಿದ ಅಧಿಕಾರಿಗಳು ಲಭ್ಯವಿಲ್ಲದ ಕಾರಣ ಹಾಗೂ ನೇರ ನೇಮಕಾತಿಗೆ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಪ್ರಕ್ರಿಯೆ ಚಾಲ್ತಿಯಲ್ಲಿರುವುದರಿಂದ ಮುಂಬಡ್ತಿ ಹಾಗೂ ನೇರ ನೇಮಕಾತಿಗಳನ್ನು ಮಾಡಿಕೊಳ್ಳಲು ವಿಳಂಬವಾಗಿರುತ್ತದೆ. ಪ್ರಸ್ತುತ ಲಭ್ಯವಿರುವ ಅಧಿಕಾರಿಗಳನ್ನು ಪ್ರಭಾರದಲ್ಲಿರಿಸಿ ಕಾರ್ಯನಿರ್ವಹಿಸಲಾಗುತ್ತಿದೆ.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಕಲ್ಯಾಣ ಕರ್ನಾಟಕ ಭಾಗದ ಜಿಲ್ಲೆಗಳಲ್ಲಿ ಖಾಲಿ ಇರುವ ಹಿರಿಯ ಸಹಾಯಕ ನಿರ್ದೇಶಕ ಮತ್ತು ಸಹಾಯಕ ನಿರ್ದೇಶಕ ಹುದ್ದೆಗಳನ್ನು ಭರ್ತಿ ಮಾಡಲು ಸಂಬಂಧಿಸಿದಂತೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಲ್ಲಿ ಹಾಲಿ ಚಾಲ್ತಿಯಲ್ಲಿರುವ ವೃಂದ ಮತ್ತು ನೇಮಕಾತಿ ನಿಯಮಗಳು 1978 ರಲ್ಲಿ ರೂಪಿಸಲ್ಪಟ್ಟಿದ್ದು, ಪ್ರಸ್ತುತ ಆಧುನಿಕ, ಶೈಕ್ಷಣಿಕ ವಿದ್ಯಾಭ್ಯಾಸ ಮತ್ತು ತರಬೇತಿಗೆ ಅನುಗುಣವಾಗಿ ವೃಂದ ಮತ್ತು ನೇಮಕಾತಿ ನಿಯಮಗಳ ಸಮಗ್ರ ಪರಿಷ್ಕರಣೆ ಅತ್ಯಗತ್ಯವಾದ ಕಾರಣ, ಈ ಕಾರ್ಯವು ಚಾಲ್ತಿಯಲ್ಲಿದ್ದು, ಸಮಗ್ರ ಪರಿಷ್ಕರಣೆಯ ನಂತರ ಕ್ಷಿಪ್ರಗತಿಯಲ್ಲಿ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುವುದು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ವತಿಯಿಂದ ಅಧಿಕಾರಿಗಳನ್ನು ನಿಯೋಜಿಸಲು ಕೆಲವು ನಿಗಮ/ಮಂಡಳಿಗಳಲ್ಲಿ ಎಕ್ಸ್-ಕೇಡರ್ ಹುದ್ದೆಗಳು ಲಭ್ಯವಿರುವ ಕಾರಣ ಸದರಿ ಹುದ್ದೆಗಳಿಗೆ ಇಲಾಖೆಯ ವತಿಯಿಂದ ನಿಯಮಾನುಸಾರ ನಿಯೋಜಿಸಲಾಗುತ್ತಿದ್ದು, ಇದನ್ನು ಹೊರತುಪಡಿಸಿ ನಿಯೋಜನೆಗೊಂಡಿರುವ ಇಬ್ಬರು ಅಧಿಕಾರಿಗಳ ನಿಯೋಜನೆಯನ್ನು ರದ್ದುಗೊಳಿಸಿ ಮಾತೃ ಇಲಾಖೆಗೆ ಹಿಂಪಡೆಯುವ ಕುರಿತಂತೆ ಕ್ರಮವಹಿಸಲಾಗುತ್ತಿದೆ.

**ಕೆಸಿಐ-ಪಿಐಪಿ/155/2023**

(ಸಿದ್ದರಾಮಯ್ಯ)
ಮುಖ್ಯಮಂತ್ರಿ